[redacted]

ಕೂಸಿನ ಮನೆ ವೀಕ್ಷಿಸಿದ ಸಿಇಒ

ತಾಯಂದಿರು ನಿರ್ಭೀತಿಯಿಂದ ನರೇಗಾ ಕಾಮಗಾರಿಗಳಲ್ಲಿ ತೊಡಗಿಕೊಳ್ಳಿ: ರಿಶಿ ಆನಂದ

ವಿಜಯಪುರ : ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿ ಕಾರ್ಮಿಕರ ಮೂರು ವರ್ಷದ ಒಳಗಿನ ಮಕ್ಕಳನ್ನು ಆರೈಕೆ ಮಾಡಲು ಜಿಲ್ಲೆಯಲ್ಲಿ 163 ಕೂಸಿನ ಮನೆಗಳನ್ನು ಪ್ರಾರಂಭ ಮಾಡಲಾಗಿದೆ. ಅದೇ ರೀತಿ ಬೆನಕನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿಯೂ ಸಹ ಕೂಸಿನ ಮನೆಯನ್ನು ಪ್ರಾರಂಭಿಸಲಾಗಿದೆ. ಎಲ್ಲರೂ ನಿಮ್ಮ ಮೂರು ವರ್ಷದ ಒಳಗಿನ ಮಕ್ಕಳನ್ನು ಕೂಸಿನ ಮನೆಯಲ್ಲಿ ಬಿಟ್ಟು ನರೇಗಾ ಕೆಲಸ ಮಾಡಬಹುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.

ಶುಕ್ರವಾರ ಅವರು ಇಂಡಿ ತಾಲೂಕಿನ ಬೆನಕನಹಳ್ಳಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿ ಮಾತನಾಡಿದರು. ಕೂಸಿನ ಮನೆಯಲ್ಲಿ ನಿಮ್ಮ ಮಕ್ಕಳನ್ನು ನೋಡಿಕೊಳ್ಳಲು ಮತ್ತು ಆರೈಕೆ ಮಾಡಲು ಪ್ರತ್ಯೇಕವಾಗಿ ಮಕ್ಕಳ ಆರೈಕೆದಾರರನ್ನು ಆಯ್ಕೆ ಮಾಡಲಾಗಿದೆ. ಅಲ್ಲಿ ಮಕ್ಕಳ ಆರೈಕೆದಾರರು ಮಕ್ಕಳಿಗೆ ಆಟ-ಪಾಠ, ಪಾಲನೆ-ಪೋಷಣೆ, ವೈಯಕ್ತಿಕ ಸ್ವಚ್ಛತೆ ಕಡೆಗೆ ವಿಶೇಷ ಗಮನ ನೀಡುತ್ತಾರೆ. ಕಾರ್ಮಿಕರು ನಿರ್ಭೀತಿಯಿಂದ ನಿಮ್ಮ ಮಕ್ಕಳನ್ನು ಕೂಸಿನ ಮನೆಗಳಲ್ಲಿ ಬಿಟ್ಟು ನೆಮ್ಮದಿಯಿಂದ ಕೆಲಸ ಮಾಡಬಹುದು. ನರೇಗಾದಡಿ ಹೆಚ್ಚು ಕೆಲಸ ನಿರ್ವಹಿಸಿ ಆರ್ಥಿಕ ಪರಿಸ್ಥಿತಿ ಸುಧಾರಿಸಿಕೊಳ್ಳಿ, ಪ್ರತಿದಿನ ಮಹಿಳೆಯರಿಗೆ ಹಾಗೂ ಪುರುಷರಿಗೆ ಸಮಾನ ಕೂಲಿ ರೂ. 349 ಇದೆ. ಎಲ್ಲರೂ ಈ ಸೌಲಭ್ಯವನ್ನು ಪಡೆದು ಅಭಿವೃದ್ಧಿಯತ್ತ ಸಾಗಬೇಕು. ಹಾಗೆಯೇ ವಿಶೇಷ ಚೇತನರು, ಹಿರಿಯ ನಾಗರಿಕರು ಹಾಗೂ ಗರ್ಭಿಣಿ ಮತ್ತು ಬಾಣಂತಿ ಮಹಿಳೆಯರಿಗೆ ನರೇಗಾ ಯೋಜನೆಯ ಕೆಲಸದಲ್ಲಿ ಶೇ.50 ರಷ್ಟು ರಿಯಾಯತಿ ನೀಡಲಾಗಿದೆ. ಆದ್ದರಿಂದ ಎಲ್ಲರೂ ಈ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದರು.

ನಂತರ ಬೆನಕನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಸರ್ಕಾರಿ ಗ್ರಂಥಾಲಯಕ್ಕೆ ಬೇಟಿ ನೀಡಿ ಅಲ್ಲಿನ ವಿದ್ಯುತ್ ವ್ಯವಸ್ಥೆ, ಕುಡಿಯುವ ನೀರು, ಪುಸ್ತಕಗಳು ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ, ಗ್ರಂಥಾಲಯದ ಮುಂಭಾಗದಲ್ಲಿ ಖಾಲಿ ಜಾಗೆಯಲ್ಲಿ ವಿವಿಧ ರೀತಿಯ ಸಸಿಗಳನ್ನು ಬೆಳೆಸಿ ಉದ್ಯಾನವನ ನಿರ್ಮಾಣ ಮಾಡಿ ಮುಕ್ತ ಗ್ರಂಥಾಲಯ ಮಾಡಲು ಸೂಚಿಸಿದರು.

ಈ ವೇಳೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಕೂಸಿನ ಮನೆ ಎಂಬ ಶಿರ್ಷಿಕೆಯಡಿ ಪ್ರಾರಂಭವಾಗಿರುವ ಶಿಶು ಪಾಲನಾ ಕೇಂದ್ರಕ್ಕೆ ಭೇಟಿ ನೀಡಿ ಕೂಸಿನ ಮನೆ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿದರು. ಇದೇ ವೇಳೆ ಮಕ್ಕಳ ಹಾಜರಾತಿ, ಮಕ್ಕಳಿಗೆ ನೀಡುತ್ತಿರುವ ಆಹಾರ, ಆಟಿಕೆ ಸಾಮಾನುಗಳನ್ನು, ಕೂಸಿನ ಮನೆ ಕಡತಗಳನ್ನು ಪರಿಶೀಲಿಸಿದರು. ಮಕ್ಕಳಿಗೆ ಸಮಯಕ್ಕೆ ಸರಿಯಾಗಿ ವ್ಯವಸ್ಥಿತವಾಗಿ ಪೌಷ್ಠಿಕ ಆಹಾರ ಒದಗಿಸಬೇಕು. ಆಟದ ಸಮಯದಲ್ಲಿ ಮಕ್ಕಳಿಗೆ ಆಟಿಕೆ ಸಾಮಾನುಗಳನ್ನು ವಿತರಿಸಬೇಕು, ಕೂಸಿನ ಮನೆಯ ಗೋಡೆಗಳ ಮೇಲೆ ಇನ್ನೂ ಹೆಚ್ಚಿನ ಆಕರ್ಷಕ ಚಿತ್ರಗಳು, ವರ್ಣಮಾಲೆಗಳು ಹಾಗೂ ಮೂಲಾಕ್ಷರಗಳನ್ನು ಬಿಡಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಸೂಚನೆ ನೀಡಿದರು.

ಬಳಿಕ ಗ್ರಂಥಾಲಯದ ಮುಂಭಾಗದಲ್ಲಿರುವ ಜಲಜೀವನ ಮಿಷನ್ ಯೋಜನೆಯಡಿ ನಿರ್ಮಾಣವಾದ ಕಾರ್ಯಾತ್ಮಕ ನಳ ಸಂಪರ್ಕ ಕಾಮುಗಾರಿಯನ್ನು ವೀಕ್ಷಿಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಯೋಜನಾ ನಿರ್ದೇಶಕರಾದ ಸಿ. ಆರ್. ಮುಂಡರಗಿ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ನೀಲಗಂಗಾ ಬಬಲಾದ, ಸಹಾಯಕ ನಿರ್ದೇಶಕರು(ಗ್ರಾ.ಉ) ಸಂಜಯ ಖಡಗೇಕರ, ರೂಗಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿ ಬಸವರಾಜ ಬಬಲಾದ, ಬೆನಕನಹಳ್ಳಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ ರಾಠೋಡ, ಕೂಸಿನ ಮನೆಯ ಮಕ್ಕಳ ಆರೈಕೆದಾರರು ಹಾಗೂ ಇತರರು ಉಪಸ್ಥಿತರಿದ್ದರು.

ಕೊನೆಯ ದಿನ 10 ನಾಮಪತ್ರ ಸಲ್ಲಿಕೆ

ವಿಜಯಪುರ ಏ : 04 ಬಿಜಾಪುರ(ಪ ಜಾ) ಲೋಕಸಭೆ ಮತಕ್ಷೇತ್ರದಲ್ಲಿ ಆರನೆ ಮತ್ತು ದಿನವಾದ ಶುಕ್ರವಾರದಂದು 9 ಅಭ್ಯರ್ಥಿಗಳಿಂದ 10 ನಾಮಪತ್ರಗಳು ಸಲ್ಲಿಕೆಯಾಗಿವೆ.

ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾಗಿ ರಮೇಶ ಜಿಗಜಿಣಗಿ ಎರಡು ನಾಮಪತ್ರ, ಎಸ್ ಯು ಸಿ ಐ ಪಕ್ಷದ ಅಭ್ಯರ್ಥಿಯಾಗಿ ನಾಗಜ್ಯೋತಿ ಬಿ.ಎನ್ ಅವರು ಒಂದು, ಭಾರತೀಯ ಜವಾನ್ ಕಿಸಾನ್ ಪಕ್ಷದ ಅಭ್ಯರ್ಥಿಯಾಗಿ ಕುಲಪ್ಪಾ ಚವ್ಹಾಣ ಒಂದು, ಭಾರತೀಯ ಜನ ಸಾಮ್ರಾಟ್ ಪಕ್ಷದ ಅಭ್ಯರ್ಥಿಯಾಗಿ ತಾರಾಬಾಯಿ ಭೋವಿ ಒಂದು, ಪಕ್ಷೇತರ ಅಭ್ಯರ್ಥಿಯಾಗಿ ಸೋಮಶೇಖರ ಭಾವಿಕಟ್ಟಿ ಒಂದು, ನ್ಯಾಷನಲ್ ಲೋಕತಂತ್ರ ಪಕ್ಷದ ಅಭ್ಯರ್ಥಿಯಾಗಿ ರಾಜು ಪವಾರ್ ಅವರು ಒಂದು, ನಕ್ಕಿ ಭಾರತೀಯ ಏಕತಾ ಪಕ್ಷದ ಅಭ್ಯರ್ಥಿಯಾಗಿ ರಾಮಾಜಿ ಯಮನಪ್ಪ ಹರಿಜನ ಉರ್ಫ ಬುದ್ಧಪ್ರಿಯ ಒಂದು, ಬಹುಜನ ಸಮಾಜ ಪಕ್ಷದ ಅಭ್ಯರ್ಥಿಯಾಗಿ ಕಲ್ಲಪ್ಪ ತೊರವಿ ಒಂದು ನಾಮಪತ್ರ ಹಾಗೂ ಪಕ್ಷೇತರ ಅಭ್ಯರ್ಥಿಯಾಗಿ ಸಂಗಪ್ಪ ಚಂದು ಲಮಾಣಿ ಒಂದು ನಾಮಪತ್ರ ಸಲ್ಲಿಸುವ ಮೂಲಕ ಕೊನೆಯ ದಿನದಂದು ಹತ್ತು ನಾಮಪತ್ರಗಳು ಸಲ್ಲಿಕೆಯಾಗಿವೆ.

ಏಪ್ರಿಲ್ 12 ರಿಂದ 19 ವರೆಗೆ ನಾಮಪತ್ರ ಸ್ವೀಕಾರ ದಿನದಿಂದ ಕೊನೆಯ ದಿನವರೆಗೆ 21 ಅಭ್ಯರ್ಥಿಗಳಿಂದ 35 ನಾಮಪತ್ರಗಳು ಸಲ್ಲಿಕೆಯಾಗಿರುತ್ತವೆ.

ಅರ್ಜಿ ಆಹ್ವಾನ

ಬೆಳಗಾವಿ.ಏ. : ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಯುವಕ ಯುವತಿಯರಿಗೆ ಮತ್ತು ನಿರುದ್ಯೋಗಿಗಳಿಗೆ ಉದ್ಯೋಗ ತರಬೇತಿ ನೀಡುವ ಉದ್ದೇಶದಿಂದ ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ (ಸಿಬಿಆರ್‌ಸೆಟಿ) ವತಿಯಿಂದ ಕೋಳಿ ಸಾಕಾಣಿಕೆ 10 ದಿನಗಳ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯುವ ಅಭ್ಯರ್ಥಿಗಳು 18 ರಿಂದ 45 ವಯಸ್ಸಿನವರಾಗಿರಬೇಕು. ಗ್ರಾಮೀಣ ಪ್ರದೇಶದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಬಿಪಿಎಲ್ ಅಥವಾ ಜಾಬ್ ಕಾರ್ಡ್ ಹೊಂದಿರಬೇಕು. ಅರ್ಜಿ ಸಲ್ಲಿಸಲು ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮೂರು ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಕಡ್ಡಾಯ ಇರಬೇಕು. ತರಬೇತಿ ಅವಧಿಯಲ್ಲಿ ಊಟ ಮತ್ತು ವಸತಿ ಉಚಿತವಾಗಿರುತ್ತದೆ.

ಆಸಕ್ತರು ಏ.27 ಒಳಗಾಗಿ ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಅಥವಾ ಇಮೇಲ್ cbrsetibelagavi@gmail.com ಗೆ ಕಳುಹಿಸಬಹುದು. ಅರ್ಜಿಯನ್ನು https://forms.gle/Y1hntNgHijkmga8d7 ಆನ್‌ಲೈನ್‌ನಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ಕಣಬರ್ಗಿ ಇಂಡಸ್ಟ್ರಿಯಲ್ ಏರಿಯಾ, ಆಟೋ ನಗರದ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ)ಯ ದೂ. ಸಂ: 0831-2440644, 8296792166, 9845750043, 8050406866, 8867388906, 9449860564 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಮೇ .5 ರಿಂದ 7 ರವರೆಗೆ ಕಲಂ 144 ಜಾರಿ

ವಿಜಯಪುರ : ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಮತದಾನವು ಮೆ.7ರಂದು ನಡೆಯಲಿದ್ದು, ಜಿಲ್ಲೆಯ ಎಲ್ಲಾ 2085 ಮತಗಟ್ಟೆಗಳಲ್ಲಿ ಮುಕ್ತ, ಶಾಂತಿಯುತ ಹಾಗೂ ಪಾರದರ್ಶಕವಾಗಿ ಚುನಾವಣೆ ನಡೆಸುವ ಸಲುವಾಗಿ ಮೇ 5 ರಿಂದ 7 ರವರೆಗೆ ಮತದಾನ ಮುಕ್ತಾಯವಾಗುವರೆಗೂ ಜಿಲ್ಲೆಯಲ್ಲಿ ಸೆಕ್ಷನ್ 144 ರ ಪ್ರತಿಭಂಧಕಾಜ್ಞೆ ಜಾರಿ ಮಾಡಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಯಾದ ಟಿ. ಭೂಬಾಲನ್ ಆದೇಶ ಹೊರಡಿಸಿದ್ದಾರೆ.

ಮೇ 5 ರಿಂದ ಮೇ 7 ರಂದು ಮತದಾನ ಮುಗಿಯವವರೆಗೂ 5 ಕ್ಕಿಂತ ಹೆಚ್ಚು ಜನರು ಗುಂಪು ಗುಂಪು ಸೇರುವುದು, ಮೆರವಣಿಗೆ, ಸಭೆ ಸಮಾರಂಭ ಜರುಗಿಸುವುದು ನಿಷೇಧಿಸಿದೆ. ಅದಲ್ಲದೇ, ಶಸ್ತ್ರಾಸ್ತ್ರಗಳನ್ನು ತೆಗೆದುಕೊಂಡು ಸಂಚರಿಸುವುದು, ಮತಗಟ್ಟೆಗಳ 100 ಮೀಟರ್ ಸುತ್ತಮುತ್ತ ರಾಜಕೀಯ ಪಕ್ಷಗಳ ಪೋಸ್ಟರ್, ಬ್ಯಾನರ್ ಹಾಗೂ ಪ್ರಚಾರ, ಸಾರ್ವಜನಿಕವಾಗಿ ಪ್ರಚೋದನಕಾರಿ ಹೇಳಿಕೆ, ವ್ಯಕ್ತಿಗಳ ತೇಜೋವಧೆ ಮಾಡುವುದು, ಮತಗಟ್ಟೆಯ ಸುತ್ತಮುತ್ತ ಧ್ವನಿವರ್ಧಕಗಳನ್ನು ಬಳಸುವುದಕ್ಕೆ ನಿರ್ಬಂದವಿರುತ್ತದೆ ಎಂದು ತಮ್ಮ ಆದೇಶದಲ್ಲಿ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಮೇ 6 , 7 ರಂದು ಸಂತೆ, ಜಾತ್ರೆ, ಉತ್ಸವ ನಿಷೇಧ

ವಿಜಯಪುರ ಏ. : ಲೋಕಸಭಾ ಸಾರ್ವತ್ರಿಕ ಚುನಾವಣೆ 2024ರ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ 2085 ಮತಗಟ್ಟೆಗಳಲ್ಲಿ ಮುಕ್ತ, ಶಾಂತಿಯುತ ಹಾಗೂ ಪಾರದರ್ಶಕವಾಗಿ ಚುನಾವಣೆ ನಡೆಸುವ ದೃಷ್ಟಿಯಿಂದ ಮತದಾನದ ಹಿಂದಿನ ದಿನ ಮೇ 6 ಹಾಗೂ ಮತದಾನ ದಿನವಾದ ಮೇ 7 ರಂದು ಜಿಲ್ಲೆಯಾದ್ಯಂತ ಸಂತೆ, ಜಾತ್ರೆ, ಉತ್ಸವಗಳನ್ನು ನಿಷೇಧಿಸಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಯಾದ ಟಿ. ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.

ನಿಷ್ಪಕ್ಷಪಾತ ತನಿಖೆಯಾಗಲಿ :ಡಾ.ಬಸವರಾಜ

ಕೊಪ್ಪಳ: ಭಾಗ್ಯನಗರದ ಬಿಜೆಪಿ ಕಾರ್ಯಕರ್ತ ಪರುಶುರಾಮ, ಪತ್ನಿ ಲಕ್ಷ್ಮಿ ಹಾಗೂ ಮಗಳು ಆಕಾಂಕ್ಷ ಕೊಲೆಯಾಗಿದ್ದು, ರಾಜ್ಯ ಸರ್ಕಾರ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ಆಗ್ರಹಿಸಿದ್ದಾರೆ.

ಹೋಟೆಲ್ ಉದ್ಯಮಿಯಾಗಿದ್ದ ಪರಶುರಾಮ್ ಅವರು, ಬಿಜೆಪಿಯಿಂದ ಎರಡು ಬಾರಿ ಭಾಗ್ಯನಗರ ಪಟ್ಟಣ ಪಂಚಾಯಿತಿ ಸದಸ್ಯ ಸ್ಥಾನಕ್ಕೆ ಬಿಜೆಪಿಯಿಂದ ಚುನಾವಣೆಗೆ ಸ್ಪರ್ಧಿಸಿ ಪರಾಭವಗೊಂಡಿದ್ದರು. ಅವರು ಬಿಜೆಪಿ ಕಟ್ಟಾಳು ಆಗಿದ್ದರು. ಅವರ ಹತ್ಯೆ ಖಂಡನೀಯ. ತಪ್ಪಿತಸ್ಥರಿಗೆ ತಕ್ಕ ಶಿಕ್ಷೆಯಾಗಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚೆನ್ನೈಸ್ ಅಮೃತ ವತಿಯಿಂದ ಚೆಕ್ ವಿತರಣೆ

ಬೆಂಗಳೂರು ಏ -: ಜರ್ಮನಿಯ IKA/ಕ್ಯುಲಿನರಿ ಒಲಿಂಪಿಕ್ಸ್‌ನಲ್ಲಿ 3 ಚಿನ್ನ, 6 ಬೆಳ್ಳಿ, ಮತ್ತು 1 ಕಂಚಿನ ಪದಕಗಳನ್ನು ಗೆದ್ದು ಐತಿಹಾಸಿಕ ವಿಜಯವನ್ನು ಆಚರಿಸಿದ ಚೆನ್ನೈಸ್ ಅಮೃತ IIHM. 124 ವರ್ಷಗಳ ಪಾಕಶಾಲೆಯ ಒಲಿಂಪಿಕ್ಸ್ ಇತಿಹಾಸದಲ್ಲಿ ಭಾರತ ಮೊದಲ ಬಾರಿಗೆ ಚಿನ್ನದ ಪದಕ ಗೆದ್ದಿದೆ. ಫೆಬ್ರವರಿ 2024 ರಲ್ಲಿ ಜರ್ಮನಿಯಲ್ಲಿ ನಡೆದ IKA / ಪಾಕಶಾಲೆಯ ಒಲಿಂಪಿಕ್ಸ್‌ನಲ್ಲಿ ತಮ್ಮ ಅತ್ಯುತ್ತಮ ಸಾಧನೆಗಳಿಗಾಗಿ ಚೆನ್ನೈಸ್ ಅಮಿರ್ತಾ IIHM ತಮ್ಮ "ಸೂಪರ್ ಹೀರೋಸ್" ಅನ್ನು ಗೌರವಿಸಿತು, ಅವರು ಏಪ್ರಿಲ್ 18, 2024 ರಂದು ಬೆಂಗಳೂರಿನ ಫೇರ್‌ಫೀಲ್ಡ್ ಬೈ ಮ್ಯಾರಿಯಟ್‌ನಲ್ಲಿ ನಡೆದ ವಿಶೇಳ ಸಮಾರಂಭದಲ್ಲಿ ಚೆಕ್ ವಿತರಿಸಿದರು.

ಬಾಣಸಿಗ ಶ್ರೇಯಾ ಅನೀಶ್ 1 ಚಿನ್ನ ಮತ್ತು 2 ಬೆಳ್ಳಿ ಪದಕಗಳನ್ನು ಪಡೆಯುವ ಮೂಲಕ ಅಸಾಧಾರಣ ಕೌಶಲ್ಯವನ್ನು ಪ್ರದರ್ಶಿಸಿದರು. ಹೆಚ್ಚುವರಿಯಾಗಿ, ಬೆಂಗಳೂರು ಕ್ಯಾಂಪಸ್ ಅನ್ನು ಪ್ರತಿನಿಧಿಸುವ ಬಾಣಸಿಗ ಜಗನ್ ಶರವಣ ಮತ್ತು ಬಾಣಸಿಗ ಪುನಿತ್ ಜೋಕಪ್ಪ ತಲಾ 1 ಚಿನ್ನ ಮತ್ತು 1 ಬೆಳ್ಳಿ ಪದಕವನ್ನು ಪಡೆದರು. ಇದಲ್ಲದೆ, ಬೆಂಗಳೂರಿನ ಕ್ಯಾಂಪಸ್‌ನ ಬಾಣಸಿಗ ಅಂಕಿತ್ ಕಾಂತರಾಜು ಶೆಟ್ಟಿ ಮತ್ತು ಬಾಣಸಿಗ ಆಕಾಶ್ ಜಾರ್ಜ್ ಮುಳಂಕುಜಿಯಿಲ್ ಅವರು ಕ್ರಮವಾಗಿ 2 ಬೆಳ್ಳಿ ಮತ್ತು ಕಂಚಿನ ಪದಕದೊಂದಿಗೆ ತಮ್ಮ ಕೌಶಲ್ಯವನ್ನು ಪ್ರದರ್ಶಿಸಿದರು. ಅವರ ಸಾಧನೆಯ ಪ್ರಮುಖ ಅಂಶವೆಂದರೆ 'ಲೈವ್ ಕಾರ್ವಿಂಗ್' ವಿಭಾಗದಲ್ಲಿ, ಅವರು ಅಸ್ಕರ್ ಚಿನ್ನದ ಪದಕಗಳನ್ನು ವಶಪಡಿಸಿಕೊಳ್ಳಲು ತಮ್ಮ ಪ್ರತಿಸ್ಪರ್ಧಿಗಳನ್ನು ಮೀರಿಸಿದರು. ಪಾಕಶಾಲೆಯ ಒಲಿಂಪಿಕ್ಸ್‌ನ 124 ವರ್ಷಗಳ ಇತಿಹಾಸದಲ್ಲಿ ಭಾರತೀಯರು ಭಾಗವಹಿಸುವುದರ ಮೂಲಕ ಇಂತಹ ಅಭೂತಪೂರ್ವ ಯಶಸ್ಸನ್ನು ಸಾಧಿಸಿ ಮೊದಲ ಬಾರಿಗೆ ಈ ಗಮನಾರ್ಹ ಸಾಧನೆಯನ್ನು ಸಾಧಿಸಿದೆ.ಈ ಹಿಂದೆ ಚೆನ್ನೈನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ, ಒಲಿಂಪಿಕ್ ಪದಕ ವಿಜೇತರನ್ನು SICA (ಸೌತ್ ಇಂಡಿಯನ್ ಚೇಫ್ ಅಸೊಸಿಯೇಷನ್) ಖ್ಯಾತ ಬಾಣಸಿಗ ದಾಮೋಧರನ್, ಅಧ್ಯಕ್ಷ SICA, ಬಾಣಸಿಗ ಶೀತರಾಮನ್, ಪ್ರಧಾನ ಕಾರ್ಯದರ್ಶಿ ಖಖಅಂ ಮತ್ತು ಇತರ ಖಖಅಂ ಮಂಡಳಿಯ ಸದಸ್ಯರು ಗುರುತಿಸಿ ಅವರ ಸಾಧನೆಗಳಿಗಾಗಿ ಶ್ಲಾಘಿಸಿದರು. ಮತ್ತೊಂದು ಕಾರ್ಯಕ್ರಮದಲ್ಲಿ ವಿಜೇತರನ್ನು ಹೈದರಾಬಾದ್‌ನಲ್ಲಿ ಗೌರವಾನ್ವಿತ ಪ್ರವಾಸೋದ್ಯಮ ಸಚಿವ ಶ್ರೀ ಕಿಶನ್ ರೆಡ್ಡಿ ಅವರು ಅಭಿನಂದಿಸಿದರು.ಚೆನ್ನೈನ ಅಮೃತ ಸಮೂಹ ಸಂಸ್ಥೆಗಳ ಅಧ್ಯಕ್ಷರಾದ ಆರ್ ಬೂಮಿನಾಥನ್ ಸೇರಿದಂತೆ ಗೌರವಾನ್ವಿತ ಗಣ್ಯರ ಉಪಸ್ಥಿತಿಯಿಂದ ಈ ಕಾರ್ಯಕ್ರಮವನ್ನು ಅಲಂಕರಿಸಲಾಯಿತು, ಅಧ್ಯಕ್ಷರು ಹನ್ನೊಂದು ಲಕ್ಷದ ಐವತ್ತು ಸಾವಿರ ರೂಪಾಯಿಗಳ ಮೌಲ್ಯದ (ರೂ. 11,50,000) ಚೆಕ್ ಮತ್ತು ಎರಡು ಲಕ್ಷ ಐವತ್ತು ಸಾವಿರ ರೂಪಾಯಿಗಳನ್ನು ಚಿನ್ನದ ಪದಕ ವಿಜೇತರಿಗೆ, ಬೆಳ್ಳಿ ಪದಕ ವಿಜೇತರಿಗೆ ಒಂದು ಲಕ್ಷ ರೂಪಾಯಿ ಮತ್ತು ಕಂಚಿನ ಪದಕ ವಿಜೇತರಿಗೆ ಐವತ್ತು ಸಾವಿರ ರೂಪಾಯಿಗಳ ಜೊತೆಗೆ ಎರಡು ಸ್ಮರಣಿಕೆ, ತರಬೇತು ದಾರ ಬಾಣಸಿಗರಿಗೆ ತಲಾ ಎರಡು ಲಕ್ಷ ರೂಪಾಯಿಗಳನ್ನು ಪ್ರಶಂಸೆಯ ಸಂಕೇತವಾಗಿ ನೀಡಲಾಗುತ್ತದೆ. ಚೆನ್ನೈಸ್ ಅಮಿರ್ತಾ ಪ್ರಾಯೋಜಿಸಿದ ಜರ್ಮನಿಯಲ್ಲಿ ನಡೆದ ಸ್ಪರ್ಧೆಯಲ್ಲಿ ಪಾಕಶಾಲೆಯ ಪ್ರತಿಭೆಯನ್ನು ಪೋಷಿಸುವ ಮತ್ತು ಪ್ರೋತ್ಸಾಹಿಸುವಲ್ಲಿ ಸಂಸ್ಥೆಯ ಬದ್ಧತೆಯನ್ನು ಪ್ರದರ್ಶಿಸಿದರು.ಈ ಸಂಧರ್ಭದಲ್ಲಿ ಸಿಇಓ ಶ್ರೀಮತಿ ಕವಿತಾ ನಂದಕುಮಾರರವರು ಮತ್ತು ವಿದ್ಯಾರ್ಥಿಗಳ ಪೋಷಕರು, ಸಂಸ್ಥೆಯ ಎಲ್ಲಾ ಸಿಬ್ಬಂದಿಗಳು ಮತ್ತು ಬಂಧುಗಳು ಹಾಜರಿದ್ದು ಸಮಾರಂಭವನ್ನು ಯಶಸ್ವಿಗೊಳಿಸಿದರು ಹಾಗೂ ವಿಶ್ವಕಪ್ ಗೆಲ್ಲುವುದಕ್ಕೆ ಜಪಾನ್, ವಿಯಾಟ್ನಾಂ ಮತ್ತು ಮಲೇಶಿಯಾ ದೇಶಗಳಲ್ಲಿ ಸ್ಪರ್ಧಿಸಲು ತಯಾರಿ ನಡೆಸಿರುವ ಸಂತೋಷದ ವಿಷಯವನ್ನು ಹಂಚಿಕೊಂಡರು.

ಶ್ರೀ ಶಿವಬೋಧರಂಗ ಸೊಸಾಯಿಟಿಗೆ ರೂ.5.70 ಕೋಟಿ ರೂ ಲಾಭ

ಮೂಡಲಗಿ: ಶ್ರೀ ಶಿವಬೋಧರಂಗ ಅರ್ಬನ್ ಕೋ-ಆಪ್ ಕ್ರೆಡಿಟ್ ಸೊಸಾಯಿಟಿಯು ಕಳೆದ ಮಾರ್ಚ ಅಂತ್ಯಕ್ಕೆ 5.70 ಕೋಟಿ ರೂ ಲಾಭವನ್ನು ಗಳಿಸಿ ಪ್ರಗತಿ ಪಥದತ್ತ ಮುನ್ನೆಡಯುತ್ತಲಿದೆ ಎಂದು ಸಂಘದ ಅಧ್ಯಕ್ಷ ಬಸವರಾಜ ಗುಲಗಾಜಂಬಗಿ ಅವರು ತಿಳಿಸಿದರು.

ಅವರು ಮೂಡಲಗಿ ಪಟ್ಟಣದ ಪ್ರತಿಷ್ಠಿತ ಶ್ರೀ ಶಿವಬೋಧರಂಗ ಅರ್ಬನ್ ಸೊಸಾಯಿಟಿ ಸಭಾ ಭವನದಲ್ಲಿ ಸೊಸಾಯಟಿಯ ಪ್ರಗತಿ ಬಗ್ಗೆ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ ಅವರು ಸದ್ಯ ಸಂಘವು 5.71 ಕೋಟಿ ರೂ ಶೇರು ಬಂಡುವಾಳ, 336.64 ಕೋಟಿ ರೂ ಠೇವು ಹಣ, 26.42 ಕೋಟಿ ರೂ ನಿಧಿಗಳು, 191.69 ಕೋಟಿ ರೂ ವಿವಿಧ ಸಾಲ ವಿತರಿಸಿ, 110.36 ಕೋಟಿ ರೂ ಇತರೆ ಬ್ಯಾಂಕುಗಳಲ್ಲಿ ಗುಂತಾವಣಿ ಹೊಂದಿ ಒಟ್ಟು 388.18 ಕೋಟಿ ರೂ ದುಡಿಯುವ ಬಂಡವಾಳ ಹೊಂದಿ, 1287.92 ಕೋಟಿ ರೂ ವಾರ್ಷಿಕ ವಹಿವಾಟು ನಡೆಸಿದೆ ಎಂದರು.ಸಂಘದ ಉಪಾಧ್ಯಕ್ಷ ಸುಭಾಸ ಸೋನವಾಲ್ಕರ ಮಾತನಾಡಿ, ಸೊಸಾಯಿಟಿಯು ಒಟ್ಟು 18 ಶಾಖೆಗಳನ್ನು ಹೊಂದಿದ್ದು, ರಾಮದುರ್ಗ ಶಾಖೆ ಸ್ವಂತ ಕಟ್ಟಡ ಹೊಂದಿದೆ, ಇನ್ನೂಳಿದ ಎಲ್ಲ 17 ಶಾಖೆಗಳಿಗೆ ನಿವೇಶನ ಖರೀಧಿಸಿ ಕಟ್ಟಡ ಪ್ರಾರಂಭಿಸಲಾಗುವದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸೊಸಾಯಿಟಿಯ ನಿರ್ದೇಶಕರಾದ ಡಾ. ಶಂಕರ ದಂಡಪ್ಪನವರ, ಅಶೋಕ ಹೊಸೂರ, ರವೀಂದ್ರ ಸೋನವಾಲಕರ, ರೇವಪ್ಪ ಕುರಬಗಟ್ಟಿ, ಪುಲಕೇಶಿ ಸೋನವಾಲಕರ, ಶಿವಬಸು ಬೂದಿಹಾಳ, ಗಂಗವ್ವ ಸಣ್ಣಪ್ಪನವರ, ಶಾರದಾ ಗುಲಗಾಜಂಬಗಿ, ವಿದ್ಯಾವತಿ ಸೊನವಾಲಕರ, ಮಂಜುಳಾ ಬಳಿಗಾರ, ಹನುಮಂತ ಸಣ್ಣಕ್ಕಿ ಹಾಗೂ ಪ್ರಧಾನ ವ್ಯವಸ್ಥಾಪಕ ಸುರೇಶ ನಾಶಿ, ಮಾರಾಟಾಧಿಕಾರಿ ಹನುಂತ ಕುಂಬಾರ, ಪ್ರಧಾನ ಕಛೇರಿ ವ್ಯವಸ್ಥಾಪಕ ಮಹೇಶ ಮಾಲಗಾರ ಇದ್ದರು.

ಶಿವಾ ಪೌಂಡೇಶನ್ ಕಾರ್ಯ ಶ್ಲಾಘನೀಯ:ಗಿರೆಣ್ಣವರ

ಮೂಡಲಗಿ: ಬೇಸಿಗೆ ರಜಾ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಇಲಾಖೆ ಬಿಸಿಯೂಟ ನೀಡುತ್ತಿರುವ ಸಂದರ್ಭದಲ್ಲಿ ಗೋಕಾಕದ ಶಿವಾ ಪೌಂಡೇಶನ್ ಸಂಸ್ಥಾಪಕರು ಅಧ್ಯಕ್ಷ ರಮೇಶ ಪೂಜೇರಿರವರು ತಮ್ಮ ಸಂಸ್ಥೆಯವತಿಯಿಂದ ವಿದ್ಯಾರ್ಥಿಗಳಿಗೆ ಬೂಸ್ಟ್ ಪಾಕೆಟ್ಟುಗಳನ್ನು ನೀಡಿರುವದು ಶ್ಲಾಘನೀಯ ಎಂದು ಶಾಲೆಯ ಪ್ರಧಾನ ಗುರುಗಳಾದ ಎ.ವ್ಹಿ ಗಿರೆಣ್ಣವರ ಹೇಳಿದರು.

ಶಿವಾ ಪೌಂಡೇಶನ ಸಂಸ್ಥೆಯವತಿಯಿಂಧ ತುಕ್ಕಾನಟ್ಟಿ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಹಾಲಿನೊಂದಿಗೆ ಬೂಸ್ಟ್ ನೀಡಿರುವ ಸಂದರ್ಭದಲ್ಲಿ ಮಾತನಾಡಿ, ಶಿವಾ ಸಂಸ್ಥೆಯು ಅನಾಥ ಮಕ್ಕಳಿಗೆ ಆಶ್ರಯ ನೀಡುವದರ ಜೊತೆಗೆ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಉತ್ತಮ ಕಾರ್ಯ ಮಾಡುತ್ತಿದೆ ಎಂದರು.

ಟಿಶಾನೂರ ಹಿರೇಹೊಳಿಯವರು ಮಾತನಾಡಿ, ಅಕ್ಷರ ದಾಸೋಹ ಸರಕಾರದ ಉತ್ತಮ ಕಾರ್ಯಕ್ರಮವಾಗಿದ್ದು ಅದರಲ್ಲೂ ಬರಗಾಲದ ಹಿನ್ನೆಲೆಯಲ್ಲಿ ರಜಾ ಅವಧಿಯಲ್ಲೂ ವಿದ್ಯಾರ್ಥಿಗಳಿಗೆ ಬಿಸಿಯೂಟ ನೀಡುತ್ತಿರುವದು ಶಿಕ್ಷಣ ಇಲಾಖೆಯ ಕಾರ್ಯಕ್ರಮ ಅಭಿನಂದನೀಯ.

ಇದರ ಜೊತೆಗೆ ವಿದ್ಯಾರ್ಥಿಗಳಿಗೆ ಪಾಠಾಭ್ಯಾಸ ಕೂಡ ಮಾಡುತ್ತಿರುವ ಶಿಕ್ಷಕರ ಕಾರ್ಯ ಮೆಚ್ಚುವಂತದ್ದು ಎಂದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ವಿಮಲಾಕ್ಷಿ ತೋರಗಲ, ಖಾತೂನ ನದಾಫ, ಸೋಮಶೇಖರ ಉಪಸ್ಥಿತರಿದ್ದರು.

ವಿಜಯಪುರ: ಏ.21ರಂದು ನೀರು ಸರಬರಾಜು ವ್ಯತ್ಯಯ

ವಿಜಯಪುರ ಏ.: ವಿಜಯಪುರ ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಕೃಷ್ಣಾ ನದಿಯ ಮೂಲದ 2ನೇ ಹಂತದ ಕೋಲ್ಹಾರ ಮೂಲ ಸ್ಥಾವರದಿಂದ ಜಲನಗರ ನೆಲಮಟ್ಟದ ಜಲಸಂಗ್ರಹಗಾರದವರೆಗೆ 900/965ಎಂ.ಎಂ ವ್ಯಾಸದ ಪಿ.ಎಸ್.ಸಿ/ಎಂ.ಎಸ್‌ಏರು ಕೊಳವೆ ಮಾರ್ಗದ ಚೈನೇಜ್ 0.00ಕಿ.ಮೀ ಕೋಲ್ಹಾರ ಜಾಕವೆಲ್ ಹತ್ತಿರಎಂ.ಎಸ್ ಕೊಳವೆ ಮಾರ್ಗದಲ್ಲಿ, ಚೈನೇಜ್ 33.350ಕಿ.ಮೀ ಸಾಯಿಬಾಬಾ ಗುಡಿ ಹತ್ತಿರ ಪಿ.ಎಸ್.ಸಿ ಕೊಳವೆ ಮಾರ್ಗದಲ್ಲಿ ಚೈನೇಜ್ 34.760ಕಿ.ಮೀ ಬಾರಾಕೋಟರಿ ತಾಂಡಾ ಹತ್ತಿರ ಪಿ.ಎಸ್.ಸಿ ಕೊಳವೆ ಮಾರ್ಗದಲ್ಲಿ, ಚೈನೇಜ್ 39.910ಕಿ.ಮೀ ಮಮದಾಪೂರ ರಮೇಶ ತೋಟದ ಹತ್ತಿರ ಪಿ.ಎಸ್.ಸಿ ಕೊಳವೆ ಮಾರ್ಗದಲ್ಲಿ ಮತ್ತು ಚೈನೇಜ್ 40.955ಕಿ.ಮೀ ಅಣ್ಣಾ ಡಾಬಾ ಹತ್ತಿರ ಪಿ.ಎಸ್.ಸಿ ಕೊಳವೆ ಮಾರ್ಗದಲ್ಲಿ ನೀರು ಸೋರುವಿಕೆ ಉಂಟಾಗಿದ್ದು ಶುದ್ಧ ನೀರು ಪೋಲಾಗುತ್ತಿರುವುದರಿಂದ, ತುರ್ತು ದುರಸ್ಥಿ ಕಾಮಗಾರಿಯನ್ನು ಏಪ್ರೀಲ್ 21ರಂದು ಮಂಡಳಿ ವತಿಯಿಂದ ಕೈಗೆತ್ತಿಕೊಳ್ಳಲು ಯೋಜಿಸಲಾಗಿದೆ.

ಆದಕಾರಣ ಏಪ್ರೀಲ್ 21ರಂದು ವಿಜಯಪುರ ನಗರಕ್ಕೆ ಕೋಲ್ಹಾರ ಶುದ್ಧ ಕುಡಿಯುವ ನೀರಿನ ಘಟಕದಿಂದ ನೀರು ಸರಬರಾಜು ಆಗುವ ಪ್ರದೇಶಗಳಿಗೆ ಕುಡಿಯುವ ನೀರು ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗುತ್ತದೆ. ಆದ್ದರಿಂದ ನಗರದ ಸಾರ್ವಜನಿಕರು ಜಲಮಂಡಳಿಯೊಂದಿಗೆ ನೀರು ಸೋರುವಿಕೆ ದುರಸ್ಥಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಸಹಕರಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನಂ.1 ನಿರ್ವಹಣಾ ಉಪ ವಿಭಾಗ ವಿಜಯಪುರದ ಸಹಾಯಕ ಕಾರ್ಯಪಾಲ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಎಲ್ಲರೂ ತಪ್ಪದೇ ಮತದಾನ ಮಾಡಿ: ಜಿ.ಪಂ. ಸಿಇಓ ರಿಷಿ ಆನಂದ

ವಿಜಯಪುರ : ನಮಗಾಗಿ, ನಮ್ಮ ಭವಿಷ್ಯಕ್ಕಾಗಿ, ನಮ್ಮ ಸಮಾಜಕ್ಕಾಗಿ ಮತ್ತು ನಮ್ಮ ದೇಶಕ್ಕಾಗಿ ಮತದಾನ ಮಾಡಿ ಚುನಾವಣೆ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಪಂಚಾಯತ್ ಕಾರ್ಯನವಾಹಕ ಅಧಿಕಾರಿ ರಿಶಿ ಆನಂದ ಹೇಳಿದರು.

ಜಿಲ್ಲಾ ಸ್ವೀಪ್ ಸಮಿತಿ ವಿಜಯಪುರ, ತಾಲೂಕ ಆಡಳಿತ ಹಾಗೂ ತಾಲೂಕ ಸ್ವೀಪ್ ಸಮಿತಿ ಇಂಡಿ ಇವರ ಸಹಯೋಗದಲ್ಲಿ ಲೋಕಸಭಾ ಚುನಾವಣೆ-2024ರ ಹಿನ್ನೆಲೆಯಲ್ಲಿ ಇಂಡಿ ತಾಲೂಕಿನ ಮಿನಿ ಆಡಳಿತ ಸೌಧದಿಂದ ರಂಗೋಲಿ ವೀಕ್ಷಣೆ ಹಾಗೂ ಹೀಲಿಯಂ ಬಲೂನ್ ಹಾರಿಸುವುದರ ಮೂಲಕ ಮತದಾನ ಜಾಗೃತಿ ಜಾಥಾ ಅಭಿಯಾನ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರು ತಪ್ಪದೇ ಮತದಾನ ಮಾಡಬೇಕು. ನಮ್ಮ ಪ್ರತಿಯೊಂದು ಮತ ದೇಶ ಕಟ್ಟುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸುತ್ತ ಮುತ್ತಲಿನ ಎಲ್ಲ ಜನರಿಗೂ ಸಹ ಮತದಾನ ಮಾಡುವಂತೆ ತಿಳಿಸಬೇಕು. ಮತದಾನದ ದಿನದಂದು ಕಡ್ಡಾಯವಾಗಿ ಮತಗಟ್ಟೆಗಳಿಗೆ ಬಂದು ಎಲ್ಲರೂ ಮತದಾನ ಮಾಡಬೇಕು ಎಂದರು.

ಇಂಡಿ ತಾಲೂಕು ಉಪ ವಿಭಾಗಾಧಿಕಾರಿಗಳಾದ ಅಭಿದ ಗದ್ಯಾಳ ಮಾತನಾಡಿ, ಲೋಕಸಭಾ ಚುನಾವಣೆ-2024ರಲ್ಲಿ ಶೇ.100 ರಷ್ಟು ಮತದಾನ ಆಗಬೇಕು.

ಪ್ರತಿಯೊಬ್ಬರೂ ಮತದಾನ ಮಾಡಿ. ಯಾರು ಮತದಾನದಿಂದ ಹೊರಗುಳಿಯಬಾರದು. ಪ್ರಜಾಪ್ರಭುತ್ವ ಹಬ್ಬದಲ್ಲಿ ಎಲ್ಲರೂ ಭಾಗಿಯಾಗಿ ಮತದಾನ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು ಎಂದರು.

ತಾಲೂಕ ಆಡಳಿತ ಸೌಧದಿಂದ ತಾಲೂಕ ಪಂಚಾಯತಿ ಕಾರ್ಯಾಲಯದವರೆಗೆ ಮೊದಲಿಗೆ ರಂಗೋಲಿ ಚಿತ್ರಗಳಿಂದ ಪ್ರಾರಂಭವಾಗಿ ಹೀಲಿಯಂ ಬಲೂನ್ ಹಾರಿಸುವುದು, 400 ಮೀಟರ ಉದ್ದದ ಪ್ರಜಾಪ್ರಭುತ್ವ ಹಬ್ಬ, ನನ್ನ ಮತ ನನ್ನ ಹಕ್ಕು ಧ್ವಜದ ಮೆರವಣಿಗೆ, ಮತದಾನ ಜಾಗೃತಿ ರಥ ಯಾತ್ರೆ, ಸ್ವಚ್ಛವಾಹಿನಿಗಳಲ್ಲಿ ಮತದಾನ ಜಾಗೃತಿಯ ಜಿಂಗಲ್ಸ್ ಹಾಡುಗಳ ಪ್ರಸಾರ, ಸಾಂಪ್ರದಾಯಿಕ ಗೊಂಬೆಗಳ ಪ್ರದರ್ಶನ, ಮತದಾನ ಜಾಗೃತಿಯ ಪ್ಲೇಕಾರ್ಡ್ ಗಳನ್ನು ಹಿಡಿದು ಘೋಷ ವಾಖ್ಯಗಳನ್ನು ಕೂಗುವುದರ ಮೂಲಕ, ಕಡಿಮೆ ಮತದಾನ ವಾಗಿರುವ ವಾರ್ಡ್‌ಗಳಲ್ಲಿ ರಥ ಸಂಚಾರ ಹಾಗೂ ಜನರಲ್ಲಿ ಮತದಾನ ಮಾಡುವಂತೆ ಮನವಿ ಹೀಗೆ ಅತೀ ವಿಜೃಂಭಣೆಯಿಂದ ಹತ್ತು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಮತದಾನ ಜಾಗೃತಿ ಮೂಡಿಸಲಾಯಿತು.

ಮತದಾನ ಜಾಗೃತಿ ಜಾಥಾವು ಇಂಡಿ ಆಡಳಿತ ಸೌಧದಿಂದ ಪ್ರಾರಂಭವಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಬಸವೇಶ್ವರ ವೃತ್ತ-ಅಂಬೇಡ್ಕರ ವೃತ್ತ-ಮಹಾವೀರ ವೃತ್ತ-ಗಾಂಧಿ ವೃತ್ತ, ಕಡಿಮೆ ಮತದಾನವಾಗಿರುವ ಶಾಂತೇಶ್ವರ ದೇವಸ್ಥಾನ ಮಾರ್ಗವಾಗಿ-ಮತದಾನ ಜಾಗೃತಿ ಜಾಥಾ ಅಭಿಯಾನ ಅಂಚೆ ಕಛೇರಿ ಮಾರ್ಗವಾಗಿ ತಾಲೂಕ ಪಂಚಾಯತಿ ಕಾರ್ಯಾಲಯದವರೆಗೆ ಬಂದು ಮುಕ್ತಾಯಗೊಂಡಿತು.

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿಗಳಾದ ಸಿ. ಆರ್. ಮುಂಡರಗಿ, ಇಂಡಿ ತಾಲೂಕು ಪಂಚಾಯತಿಯ ಸಹಾಯಕ ನಿರ್ದೇಶಕರು(ಗ್ರಾ.ಉ) ಸಂಜಯ ಖಡಗೇಕರ, ರೂಗಿ ಗ್ರಾಮ ಪಂಚಾಯತಿಯ ಬಸವರಾಜ ಬಬಲಾದ, ತಾಲೂಕು ಆಡಳಿತ ಅಧಿಕಾರಿಗಳು, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ನೀಲಗಂಗಾ ಬಬಲಾದ, ಜಿಲ್ಲಾ ಸ್ವೀಪ್ ಸಮಿತಿಯ ರಾಯಭಾರಿಗಳಾದ ಸಹನಾ ಕುಡಿಗನೂರ, ರಾಜೇಶ ಪವಾರ, ಜಿಲ್ಲಾ ಪಂಚಾಯತಿಯ ಸಿಬ್ಬಂದಿಯವರು, ತಾಲೂಕು ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಯವರು, ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿಯವರು, ಸ್ವ-ಸಹಾಯ ಸಂಘದ ಮಹಿಳೆಯರು ಹಾಗೂ ಇತರರು ಉಪಸ್ಥಿತರಿದ್ದರು.